**All India Radio: Bangalore**
**Regional Bulletin In Kannada**
**23.06.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**23.06.2025 / 2.30 p.m.**

**<><><><>**

ಮುಖ್ಯಾಂಶಗಳು

೧. ರಾಯಚೂರಿನಲ್ಲಿ ೯೩೩ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ

೨. ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆಯಲ್ಲಿ ; ಈ ಬಾರಿ ೪ ಲಕ್ಷದ ೫೦ ಸಾವಿರ ಮೆಟ್ರಿಕ್ ಟನ್ ಕಬ್ಬು ನುರಿಯುವ ಗುರಿ

೩. ರಾಜ್ಯ ಸರ್ಕಾರದ ಭ್ರಷ್ಟಾಚಾರಕ್ಕೆ ಕಾಂಗ್ರೆಸ್ ಶಾಸಕರ ಹೇಳಿಕೆಗಳೇ ಸಾಕ್ಷಿ - ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ

೪. ಕೊಡಗು ಜಿಲ್ಲೆಯಾದ್ಯಂತ ಧಾರಕಾರ ಮಳೆ ; ಹಾರಂಗಿ ಜಲಾಶಯದಲ್ಲಿ ನೀರಿನ ಪ್ರಮಾಣ ಏರಿಕೆ

><><><><><><><><

ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ೯೩೬ ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಬುಡಕಟ್ಟು ಸಾಂಸ್ಕೃತಿಕ ಉತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಚಾಲನೆ ನೀಡಿದರು. ಯರಗೇರಾ ಗ್ರಾಮದಲ್ಲಿ ಇಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ನಾಮಕರಣ, ಉದ್ಯಾನ ಹಾಗೂ ಕಂಚಿನ ಪುತ್ಥಳಿ ಅನಾವರಣ, ಕಲ್ಯಾಣ ಕರ್ನಾಟಕ, ಮಾನವ ಜಿನೋಮ್ ಅಧ್ಯಯನ ಸಂಸ್ಥೆಯ ಶಂಕುಸ್ಥಾಪನೆಯನ್ನು ಅವರು ನೆರವೇರಿಸಿದರು.

><><><><><><><><

ಮಂಡ್ಯ ಜಿಲ್ಲೆಯ ರೈತರ ಜೀವನಾಡಿ ಮೈಶುಗರ್ ಸಕ್ಕರೆ ಕಾರ್ಖಾನೆಯಲ್ಲಿ ಈ ಬಾರಿ ೪ ಲಕ್ಷ ೫೦ ಸಾವಿರದ ಮೆಟ್ರಿಕ್ ಟನ್ ಕಬ್ಬು ನುರಿಸುವ ಗುರಿ ಹೊಂದಲಾಗಿದೆ ಎಂದು ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ.ರವಿಕುಮಾರ್ ಗಣಿಗ ತಿಳಿಸಿದ್ದಾರೆ. ಮಂಡ್ಯ ನಗರದ ಮೈಶುಗರ್ ಸಕ್ಕರೆ ಕಾರ್ಖಾನೆಯಲ್ಲಿ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಮೈಶುಗರ್ ಸಕ್ಕರೆ ಕಾರ್ಖಾನೆಗೆ ಮೂಲ ಬಂಡವಾಳಕ್ಕೆ ೨೮ ಕೋಟಿ ರೂಪಾಯಿ ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಮೈ ಶುಗರ್ ಸಕ್ಕರೆ ಕಾರ್ಖಾನೆಯ ಅಧ್ಯಕ್ಷರು ಸಲ್ಲಿಸಿದ್ದಾರೆ ಎಂದು ಮಾಹಿತಿ ನೀಡಿದರು. ಮೈಶುಗರ್ ಸಕ್ಕರೆ ಕಾರ್ಖಾನೆ ರೈತರ ಏಳಿಗೆಗಾಗಿ ನಡೆಸುತ್ತಿರುವ ಕಾರ್ಖಾನೆಯಾಗಿದ್ದು, ಕಾರ್ಖಾನೆಯನ್ನು ಲಾಭ-ನಷ್ಟ ಲೆಕ್ಕ ಮಾಡಿಕೊಂಡು ನಡೆಸಲು ಸಾಧ್ಯವಿಲ್ಲ. ನಿಧನಗತಿಯಲ್ಲಿ ಮೈಶುಗರ್ ಸಕ್ಕರೆ ಕಾರ್ಖಾನೆ ಸಹ ಲಾಭ ಗಳಿಸಲಿದೆ. ಇದಕ್ಕೆ ಸಮಯಾವಕಾಶ ಬೇಕಿದೆ ಎಂದು ಹೇಳಿದ್ದಾರೆ. ಈ ಸಂದರ್ಭದಲ್ಲಿ ಮೈಶುಗರ್ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಸಿ.ಡಿ.ಗಂಗಾಧರ್, ಜಿಲ್ಲಾಧಿಕಾರಿ ಡಾ.ಕುಮಾರ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

><><><><><><><><

ಕಳೆದ ಎರಡು ವರ್ಷದಿಂದ ವಿಶೇಷ ಅನುದಾನ ಬಿಡುಗಡೆ ಮಾಡದೇ ಇರುವುದರಿಂದ ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಇನ್ನೆರಡು ದಿನಗಳಲ್ಲಿ ರಾಜೀನಾಮೆ ನೀಡಲಾಗುವುದು ಎಂದು ಕಾಗವಾಡ ಕಾಂಗ್ರೆಸ್ ಶಾಸಕ ರಾಜು ಕಾಗೆ ತಿಳಿಸಿದ್ದಾರೆ. ಚಿಕ್ಕೋಡಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ರಾಜ್ಯ ಸರ್ಕಾರದಿಂದ ಅನುದಾನ ಬಿಡುಗಡೆಯಾಗುತ್ತಿಲ್ಲ ಎಂದು ಬೇಸರ

ವ್ಯಕ್ತಪಡಿಸಿದ್ದಾರೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜಕಾಗೆ ಅವರೊಂದಿಗೆ ಚರ್ಚಿಸಿವುದಾಗಿ ತಿಳಿಸಿದ್ದಾರೆ.

><><><><><><><><

ಅಂಗೈ ಹುಣ್ಣಿಗೆ ಕನ್ನಡಿ ಹಿಡಿಯುವ ಅವಶ್ಯಕತೆ ಇಲ್ಲ ಎನ್ನುವಂತೆ ಕಾಂಗ್ರೆಸ್ ಪಕ್ಷದ ಭ್ರಷ್ಟಚಾರ, ಅವರದೇ ಆದ ಜನಪ್ರತಿನಿಧಿಗಳು ಹೇಳುತ್ತಿರುವಿದ್ದಕ್ಕೆ ಸಾಕ್ಷಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಆರೋಪಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಭ್ರಷ್ಟಾಚಾರದಲ್ಲಿ ತೊಡಗಿದೆ. ಕಾಂಗ್ರೆಸ್ ಪಕ್ಷದ ಶಾಸಕ ರಾಜು ಕಾಗೆ, ಸರ್ಕಾರದಲ್ಲಿ ಒಂದು ಪೈಸೆ ಕೆಲಸ ಆಗ್ತಿಲ್ಲ ಎಂದು ಹೇಳಿದ್ದಾರೆ. ಸರ್ಕಾರ ಬಂದ ಮೇಲೆ ಬೆಲೆ ಏರಿಕೆ ಮಾಡಿದ್ದೇ ದೊಡ್ಡ ಕೆಲಸ. ಯಾವುದೇ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ಶಾಸಕ ರಾಜು ಕಾಗೆ ಸತ್ಯ ನುಡಿದಿದ್ದಾರೆ ಎಂದು ಹೇಳಿದ್ದಾರೆ.

><><><><><><><><

ಅಪರೇಶನ್ ಸಿಂಧು ಮೂಲಕ, ಯುದ್ಧಪೀಡಿತ ಇರಾನ್‌ನಿಂದ ಭಾರತೀಯ ರಾಯಭಾರ ಕಚೇರಿ ಮೂಲಕ ಕೇಂದ್ರ ಸರ್ಕಾರ, ಭಾರತೀಯ ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ತಾಯ್ನಾಡಿಗೆ ಕರೆ ತರುತ್ತಿದೆ. ಇದುವರೆಗೆ ಒಂದು ಸಾವಿರದ ೮೦೦ ಭಾರತೀಯರು ಸ್ವದೇಶಕ್ಕೆ ಮರಳಿದ್ದಾರೆ. ಇರಾನ್ ರಾಜಧಾನಿ ಟೆಹರಾನ್‌ನಲ್ಲಿ ವೈದ್ಯಕೀಯ ವ್ಯಾಸಂಗ ಮಾಡುತ್ತಿದ್ದ ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲೂಕು ಆಲೀಪುರದ ಒಟ್ಟು ೧೧ ಜನ ವಿದ್ಯಾರ್ಥಿಗಳು ಸುರಕ್ಷಿತವಾಗಿ ತಮ್ಮ ಮನೆಗಳಿಗೆ ತಲುಪಿದ್ದಾರೆ.

><><><><><><><><

ಧಾರವಾಡದ ಭಾರತೀಯ ತಂತ್ರಜ್ಞಾನ ಸಂಸ್ಥೆಗೆ ಕೇಂದ್ರ ಸರ್ಕಾರ ೨ ಸಾವಿರ ಕೋಟಿ ರೂಪಾಯಿ ಹೆಚ್ಚುವರಿ ಅನುದಾನ ನೀಡುತ್ತಿದೆ ಎಂದು ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯ ಬಿ.ವಿ.ಭೂಮರೆಡ್ಡಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕರ ಸಂಘ ಆಯೋಜಿಸಿದ್ದ, 'ಭಾರತೀಯ ಶಿಕ್ಷಣ ಪದ್ಧತಿ: ಶಿಕ್ಷಕರ ನಿಜವಾದ ಪಾತ್ರ' ವಿಷಯದ ರಾಷ್ಟ್ರೀಯ ಸಂವಾದ ಕಾರ್ಯಕ್ರಮದ, ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦, ಐತಿಹಾಸಿಕ ಶಿಕ್ಷಣ ಸುಧಾರಣಾ ಯೋಜನೆಯಾಗಿದೆ. ಭಾರತವನ್ನು ಜಾಗತಿಕ ನೆಲೆಯಲ್ಲಿ, ಜ್ಞಾನದ ಮಹಾಶಕ್ತಿಯಾಗಿ ರೂಪಿಸುವ ಗುರಿ ಹೊಂದಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಹೇಳಿದರು.

><><><><><><><><

ಹಾವೇರಿ ಜಿಲ್ಲೆಯ ರೈತರು ತಾವು ಬೆಳೆದಂತಹ ಆಹಾರ ಉತ್ಪನ್ನಗಳನ್ನು ಕೆಡದಂತೆ, ಹಾಳಾಗದಂತೆ ಶೇಖರಿಸಿಡಲು, ೩೦ ಕೋಟಿ ರೂಪಾಯಿ ವೆಚದಲ್ಲಿ ಶೀಥಲ ಗೃಹ ನಿರ್ಮಾಣ ಮಾಡಲಾಗುವುದು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ಹಾವೇರಿ ಜಿಲ್ಲೆ ರಾಣೆಬೆನ್ನೂರ ಬಳಿಯ ಹೂಲಿಹಳ್ಳಿ-ಕೂನಬೇವು ಗ್ರಾಮದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿಂದು ೮ ಸಾವಿರದ ೭೬೪ ಮೆಟ್ರಿಕ್ ಟನ್ ಸಾಮರ್ಥ್ಯದ ಮೂರು ನೂತನ ಶೀಥಲ ಗೃಹ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿರುವ ರೈತರು ಹಾಗೂ ಅಲ್ಲಿನ ವರ್ತಕರು ಶೀಥಲ ಗೃಹಗಳ ಸೌಲಭ್ಯದ ಕೊರತೆ ಎದುರಿಸುತ್ತಿರುವುದನ್ನು ಮನಗಂಡು, ಆರ್‌ಐಡಿಎಫ್ ಯೋಜನೆಯಡಿಯಲ್ಲಿ ಅನುಮೋದನೆಗೊಂಡ ಮೂರು ಶೀಥಲ ಗೃಹಗಳನ್ನು ನಿರ್ಮಾಣ ಮಾಡಲಾಗುವುದು. ಅಲ್ಲದೇ ಮಾರುಕಟ್ಟೆ ಪ್ರಾಂಗಣಕ್ಕೆ ಆಧುನಿಕ ಮೂಲಸೌಲಭ್ಯ ಕಲ್ಪಿಸಲಾಗುವುದು ಎಂದು ತಿಳಿಸಿದ್ದಾರೆ. ರೈತರು ಹಾಗೂ ವರ್ತಕರು ತಾವು ಬೆಳೆದಂತಹ ಹಾಗೂ ಖರೀದಿಸಿದಂತಹ ಕೃಷಿ ಉತ್ಪನ್ನಗಳನ್ನು ಸಂಗ್ರಹಣೆ ಮಾಡಲು, ಇದರ ಸದುಪಯೋಗ ಪಡೆಯಬಹುದಾಗಿದೆ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು.

><><><><><><><><

ಉತ್ತರಕನ್ನಡ ಜಿಲ್ಲೆಯಲ್ಲಿ ಮುದ್ರಾ ಯೋಜನೆ, ಪಿ.ಎಂ. ಸ್ವನಿಧಿ ಯೋಜನೆ, ಪಿ.ಎಂ. ಎಫ್.ಎಂ.ಇ ಯೋಜನೆ, ಪ್ರಧಾನ ಮಂತ್ರಿ ಜನಧನ್ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ ಸೇರಿದಂತೆ ಕೇಂದ್ರ ಸರ್ಕಾರದ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನ ಮಾಡಲಾಗಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದ್ದಾರೆ. ಕಾರವಾರದಲ್ಲಿಂದು  ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಯೋಜನೆಗಳ ಅನುಷ್ಠಾನದ ಬಗ್ಗೆ ಅಂಕಿ-ಅಂಶ ಸಮೇತವಾಗಿ ವಿವರಿಸಿದರು. ಮುದ್ರಾ ಯೋಜನೆಯಲ್ಲಿ ಜಿಲ್ಲೆಯಲ್ಲಿ ೨೨ ಸಾವಿರದ ೪೧೨ ಜನ ಸಾಲ ಪಡೆದಿದ್ದಾರೆ. ಪಿ.ಎಂ ಸ್ವ-ನಿಧಿ ಯೋಜನೆಯ ಲಾಭವನ್ನು ೮ ಸಾವಿರದ ೫೧೦ ಜನ ಪಡೆದಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

><><><><><><><><

ಧ್ವನಿ: ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, (೨೮ ಸೆಕೆಂಡುಗಳು)

><><><><><><><><

ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ಧಾರಾಕಾರ ಮಳೆಯಾಗುತ್ತಿದೆ. ಕಳೆದ ೨೪ ಗಂಟೆಗಳಲ್ಲಿ ಕೊಡಗು ಜಿಲ್ಲೆಯಲ್ಲಿ ೯೯ ಮಿಲಿ ಮೀಟರ್ ಮಳೆಯಾಗಿದೆ. ಮಳೆಯಿಂದಾಗಿ ಕೊಡಗಿನ ಅಲ್ಲಲ್ಲಿ ಭಾರೀ ಗಾತ್ರದ ಮರಗಳು ರಸ್ತೆಗೆ ಉರುಳಿ ಬಿದ್ದ ಪರಿಣಾಮ, ಕೆಲವೆಡೆ ರಸ್ತೆ ಸಂಚಾರ ಸ್ಥಗಿತಗೊಂಡಿದೆ. ವಿದ್ಯುತ್ ಕಂಬಗಳು ಉರುಳಿ ಬಿದ್ದಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಕಾವೇರಿ ನದಿ ಜಲಾನಯನ ವ್ಯಾಪ್ತಿಯಲ್ಲಿ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೊಡಗಿನ ಪ್ರಮುಖ ಜಲಾಶಯವಾದ ಹಾರಂಗಿ ಅಣೆಕಟ್ಟೆಗೆ ೫ ಸಾವಿರದ ೨೬೬ ಕ್ಯೂಸೆಕ್ ನೀರಿನ ಒಳಹರಿವಿದೆ. ಜಲಾಶಯದಿಂದ ನದಿಗೆ ೩ ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ. ೨ ಸಾವಿರ ೮೫೯ ಅಡಿ ಗರಿಷ್ಟ ಸಂಗ್ರಹಣಾ ಸಾಮರ್ಥ್ಯದ ಹಾರಂಗಿಯಲ್ಲಿಂದು ೨ ಸಾವಿರ ೮೫೧.೬೬ ಅಡಿ ನೀರಿನ ಸಂಗ್ರಹವಿದೆ.

><><><><><><><><

ಮುಂಗಾರು ಹಾಗೂ ಮೃಗಶಿರಾ ಮಳೆ ವಾಡಿಕೆಯಂತೆ, ಉತ್ತಮವಾಗಿ ಹಾವೇರಿ ಜಿಲ್ಲೆಯಾದ್ಯಂತ ಸುರಿದಿದೆ. ಜಿಲ್ಲೆಯಲ್ಲಿ ಒಟ್ಟು ೩ ಲಕ್ಷದ ೧೪ ಸಾವಿರ ಹೆಕ್ಟರ್ ಕೃಷಿ ಭೂಮಿಯಲ್ಲಿ, ಬಿತ್ತನೆಯ ಗುರಿ ಇದೆ. ಈಗಾಗಲೇ ೨ ಲಕ್ಷದ ೩೪ ಸಾವಿರ ಹೆಕ್ಟರ್ ಪ್ರದೇಶದಲ್ಲಿ ಬಿತ್ತನೆ ಕಾರ್ಯ ನಡೆದಿದೆ. ಶೇಕಡ ೭೪ ರಷ್ಟು ಬಿತ್ತನೆ ಕಾರ್ಯ ಪೂರ್ಣಗೊಂಡಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ತಿಳಿಸಿದ್ದಾರೆ.

><><><><><><><><

ರಾಜ್ಯ ಸರ್ಕಾರವು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲೂಕಿನ ಸ್ಮಾರಕ, ದೇವಾಲಯಗಳನ್ನು ರಾಜ್ಯ ಸಂರಕ್ಷಿತ ಸ್ಮಾರಕವೆಂದು ಘೋಷಿಸಲು ಅಭಿಪ್ರಾಯಪಟ್ಟಿದ್ದು, ಪ್ರಾಥಮಿಕ ಅಧಿಸೂಚನೆ ಹೊರಡಿಸಿದೆ. ಜಿಲ್ಲೆಯ ನೆಲಮಂಗಲ ತಾಲೂಕಿನ ಮಣ್ಣೆ ಗ್ರಾಮದ ಶ್ರೀ ಕಪಿಲೇಶ್ವರ ದೇವಾಲಯ, ಅಕ್ಕ ತಂಗಿ ಗುಡಿ, ಶ್ರೀ ಸೋಮೇಶ್ವರ ದೇವಾಲಯ, ಬಸದಿ, ಶಾಸನಗಳು, ವೀರಗಲ್ಲುಗಳು, ಗರುಡ ವಿಗ್ರಹ ಮತ್ತು ಶ್ರೀ ಸಪ್ತ ಮಾತೃಕೆ  ದೇವಾಲಯಗಳನ್ನು ರಾಜ್ಯ ಸಂರಕ್ಷಿತ ಸ್ಮಾರಕವನ್ನಾಗಿ ಘೋಷಿಸಲು ಉದ್ದೇಶಿಸಲಾಗಿದೆ.

><><><><><><><><